# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2016-17ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 53 ರನ್ವಯ ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಗೆ ಆರ್ಥಿಕ ನೆರವು ಕುರಿತು.

**ಓದಲಾಗಿದೆ:**

ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರ ಪತ್ರ ಸಂಖ್ಯೆ: ಯೋಜನೆ/ಪಿಎಸ್1/ಹೊಕಾ-ರೇ.ಉ.ಸ.ಅ/7/2016-17, ದಿನಾಂಕ: 13/16-04-2016

**ಪ್ರಸ್ತಾವನೆ:**

2016-17ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-53 ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ.

> ನಮ್ಮ ಸರ್ಕಾರವು ವರ್ಷವಿಡಿ ರೇಷ್ಮೆ ನೂಲಿನ ಬೆಲೆಯನ್ನು ಸ್ಥಿರವಾಗಿರಿಸುವುದಕ್ಕೆ ಹಾಗೂ ನೇರ ಮಾರುಕಟ್ಟೆಯನ್ನು ಪ್ರವೇಶಿಸಲು ಸಾಧ್ಯವಾಗದಿರುವ ಸಣ್ಣ ರೀಲರುಗಳಿಗೆ ಉತ್ತಮ ಮಾರುಕಟ್ಟೆಯನ್ನು ಕಲ್ಪಿಸಲು ಬದ್ಧವಾಗಿದೆ. ಕೆಎಸ್ಎಂಬಿ ಯ ಈ ದ್ಯೆಯೋದ್ದೇಶವನ್ನು ಸಾಧಿಸುವ ನಿಟ್ಟಿನಲ್ಲಿ ಆಡಳಿತಾತ್ಮಕ ವೆಚ್ಚಗಳನ್ನು ಭರಿಸುವುದಕ್ಕೆ 5 ಕೋಟಿ ರೂ.ಗಳನ್ನು ನೀಡಲು ಉದ್ದೇಶಿಸಿದೆ. ಮಾರುಕಟ್ಟೆ ಪ್ರವೇಶಿಸುವುದಕ್ಕೆ ಅಗತ್ಯವಾದ ನೆರವನ್ನು ಬೆಲೆ ಸ್ಥಿರೀಕರಣ ನಿಧಿಯಿಂದ ಒದಗಿಸಲಾಗುವುದು.

ಮೇಲೆ ಓದಲಾದ ದಿನಾಂಕ 13/16-04-2016ರ ಪತ್ರದಲ್ಲಿ ಕಚ್ಚಾ ರೇಷ್ಮೆ ದರಗಳಲ್ಲಿ ಸ್ಥಿರತೆ ತರಲು ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಯು ಪ್ರಧಾನ ಪಾತ್ರ ವಹಿಸುತ್ತದೆ. ಕಚ್ಚಾ ರೇಷ್ಮೆ ದರಗಳಲ್ಲಿ ಕುಸಿತ ಉಂಟಾಗುವ ಸಂದರ್ಭಗಳಲ್ಲಿ ರೇಷ್ಮೆ ವಿನಿಮಯ ಕೇಂದ್ರಗಳಲ್ಲಿ ಕಚ್ಚಾ ರೇಷ್ಮೆ ಖರೀದಿಯಲ್ಲಿ ಭಾಗವಹಿಸುವುದರಿಂದ ಹಾಗೂ ಕಚ್ಚಾ ರೇಷ್ಮೆ ಖರೀದಿಸುವುದರಿಂದ ಕಚ್ಚಾ ರೇಷ್ಮೆ ದರಗಳ ಏರಿಳಿತಗಳಲ್ಲಿ ಸ್ಥಿರತೆ ತರಬಹುದಾಗಿದೆ. ಇದಕ್ಕಾಗಿ ಈಗಾಗಲೇ ಸರ್ಕಾರದ ಆದೇಶ ಸಂಖ್ಯೆ: ತೋಇ 09 ರೇಉನಿ 2015, ದಿನಾಂಕ 15-05-2015 ರಲ್ಲಿ ರೂ. 10.00 ಕೋಟಿಗಳ ಸಾಲವನ್ನು ಒದಗಿಸಲಾಗಿದೆ. ಸದರಿ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುವ ಅಧಿಕಾರಿ/ಸಿಬ್ಬಂದಿಗಳ ವೇತನ ಹಾಗೂ ಭತ್ಯೆಗಳು ಮತ್ತು ಮೂಲ ಭೂತ ಸೌಕರ್ಯಗಳ ಪೂರೈಕೆಗಾಗಿ ಸಂಸ್ಥೆಯಲ್ಲಿ ಅನುದಾನದ ಕೊರತೆ ಇರುವುದರಿಂದ ಸಂಸ್ಥೆಯ ಧ್ಯೇಯೋದ್ದೇಶಗಳನ್ನು ಸಮರ್ಪಕವಾಗಿ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಈ ಹಿನ್ನಲೆಯಲ್ಲಿ ರೇಷ್ಮೆ ನೂಲು ಬಿಚ್ಚಾಣಿಕೆದಾರರ ಹಿತದೃಷ್ಟಿಯನ್ನು ಕಾಪಾಡಲು ಸದರಿ ಸಂಸ್ಥೆಯು ಪರಿಪೂರ್ಣವಾಗಿ ಕೆಲಸ ನಿರ್ವಹಿಸಲು ಅನುವಾಗಲು ಆರ್ಥಿಕ ನೆರವು ನೀಡಿ ಸಂಸ್ಥೆಯನ್ನು ಬಲಪಡಿಸುವ ಅಗತ್ಯವಿರುತ್ತದೆ. ಈ ನಿಟ್ಟಿನಲ್ಲಿ ಆಡಳಿತಾತ್ಮಕ ವೆಚ್ಚ ಭರಿಸಲು ಅಗತ್ಯ ಅರ್ಥಿಕ ನೆರವು ನೀಡಲು ಉದ್ದೇಶಿಸಿದೆ.

ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಯು ರೇಷ್ಮೆ ವಿನಿಮಯ ಕೇಂದ್ರಗಳಲ್ಲಿ ನಡೆಯುವ ವಹಿವಾಟಿನಲ್ಲಿ ಕಚ್ಚಾ ರೇಷ್ಮೆಯನ್ನು ಖರೀದಿಸಲು ಸಕ್ರಿಯವಾಗಿ ಪಾಲುಗೊಂಡಲ್ಲಿ ಕಚ್ಚಾ ರೇಷ್ಮೆಗೆ ಸ್ಪರ್ಧಾತ್ಮಕ ದರ ದೊರೆಯುತ್ತದೆ. ಸದರಿ ಸಂಸ್ಥೆಯ ಆಡಳಿತಾತ್ಮಕ ವೆಚ್ಚಕ್ಕೆ ಅನುದಾನ ಒದಗಿಸಲಾಗುವುದು. ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಯು ರೇಷ್ಮೆ ವಿನಿಮಯ ಕೇಂದ್ರಗಳಲ್ಲಿ ನಡೆಯುವ ವಹಿವಾಟಿನಲ್ಲಿ ಕಚ್ಚಾ ರೇಷ್ಮೆಯನ್ನು ಖರೀದಿಸಲು ಸಕ್ರಿಯವಾಗಿ ಪಾಲುಗೊಂಡಲ್ಲಿ ಕಚ್ಚಾ ರೇಷ್ಮೆಗೆ ಸ್ಪರ್ಧಾತ್ಮಕ ದರ ದೊರೆಯುತ್ತದೆ. ಇದರಿಂದ ಕಚ್ಚಾ ರೇಷ್ಮೆಯ ಬೆಲೆಯಲ್ಲಿ ಸ್ಥಿರತೆ ತರಲು ಸಹಾಯವಾಗುತ್ತದೆ. ಸದರಿ ಮಂಡಳಿಯನ್ನು ಆರ್ಥಿಕವಾಗಿ ಬಲಪಡಿಸುವುದು ಯೋಜನೆಯ ಗುರಿಯಾಗಿರುತ್ತದೆ. ಸದರಿ ಯೋಜನೆಯ ಫಲಾನುಭವಿಗಳು ರೇಷ್ಮೆ ನೂಲು ಬಿಚ್ಚಾಣಿಕೆದಾರರು ಹಾಗೂ ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಯಾಗಿರುತ್ತದೆ.

ಪು.ತಿ.ನೋ. . . .

ಆದ್ದರಿಂದ, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಯನ್ನು ಆರ್ಥಿಕವಾಗಿ ಬಲಪಡಿಸುವ ಸಲುವಾಗಿ ರೂ.500.00 ಲಕ್ಷಗಳ ಅನುದಾನದ ಅವಶ್ಯಕತೆ ಇದ್ದು, ಈ ವೆಚ್ಚವನ್ನು ಯೋಜನಾ ಲೆಕ್ಕ ಶೀರ್ಷಿಕೆ ಕರ್ನಾಟಕ ರೇಷ್ಮೆ ವ್ಯವಸಾಯ ಯೋಜನೆ 2851-00-107-1-80 ರಡಿ ಒದಗಿಸಿರುವ ರೂ. 5142.00 ಲಕ್ಷಗಳಲ್ಲಿ ಭರಿಸುವುದಾಗಿ ತಿಳಿಸುತ್ತಾ, ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವಂತೆ ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರು ಕೋರಿರುತ್ತಾರೆ.

ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವ ಮೇರೆಗೆ ರೇಷ್ಮೆ ನೂಲಿನ ಬೆಲೆಯನ್ನು ಸ್ಥಿರವಾಗಿರಿಸುವುದಕ್ಕೆ ಹಾಗೂ ನೇರ ಮಾರುಕಟ್ಟೆಯನ್ನು ಪ್ರವೇಶಿಸಲು ಸಾಧ್ಯವಾಗದಿರುವ ಸಣ್ಣ ರೀಲರ್‌ಗಳಿಗೆ ಉತ್ತಮ ಮಾರುಕಟ್ಟೆಯನ್ನು ಕಲ್ಪಿಸುವ ಹೊಸ ಕಾರ್ಯಕ್ರಮದ ಧ್ಯೇಯೋದ್ದೇಶವನ್ನು ಸಾಧಿಸಲು ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಗೆ ಆಡಳಿತಾತ್ಮಕ ವೆಚ್ಚವನ್ನು ಭರಿಸಲು ರೂ. 500.00 ಲಕ್ಷಗಳನ್ನು ಪ್ರಸಕ್ತ ಸಾಲಿನ ಲೆಕ್ಕ ಶೀರ್ಷಿಕೆ 2851-00-107-1-80 (ಯೋಜನೆ) ರಡಿ ಒದಗಿಸಿರುವ ರೂ. 5142.00 ಲಕ್ಷಗಳಿಂದ ಭರಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ನಿರ್ಧರಿಸಿರುವ ಕಾರಣ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ : ತೋಇ 78 ರೇಕೃವಿ 2016,</u>**
**<u>ಬೆಂಗಳೂರು, ದಿನಾಂಕ: 23-07-2016.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವ ಮೇರೆಗೆ ರೇಷ್ಮೆ ನೂಲಿನ ಬೆಲೆಯನ್ನು ಸ್ಥಿರವಾಗಿರಿಸುವುದಕ್ಕೆ ಹಾಗೂ ನೇರ ಮಾರುಕಟ್ಟೆಯನ್ನು ಪ್ರವೇಶಿಸಲು ಸಾಧ್ಯವಾಗದಿರುವ ಸಣ್ಣ ರೀಲರ್‌ಗಳಿಗೆ ಉತ್ತಮ ಮಾರುಕಟ್ಟೆಯನ್ನು ಕಲ್ಪಿಸುವ ಹೊಸ ಕಾರ್ಯಕ್ರಮದ ಧ್ಯೇಯೋದ್ದೇಶವನ್ನು ಸಾಧಿಸಲು ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಗೆ ಆಡಳಿತಾತ್ಮಕ ವೆಚ್ಚವನ್ನು ರೂ. 500.00 ಲಕ್ಷಗಳಲ್ಲಿ ಭರಿಸಲು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಈ ವೆಚ್ಚವನ್ನು 2016-17ನೇ ಸಾಲಿನ ಲೆಕ್ಕ ಶೀರ್ಷಿಕೆ 2851-00-107-1-80 – ಕರ್ನಾಟಕ ರೇಷ್ಮೆ ವ್ಯವಸಾಯ ಯೋಜನೆಯಡಿ ಒದಗಿಸಿರುವ ರೂ. 5142.00 ಲಕ್ಷಗಳಿಂದ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 17 ಎಫ್‌ಆರ್‌ಓ 2016, ದಿನಾಂಕ 14-07-2016 ರ ಸಹಮತಿ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 313 ವೆಚ್ಚ-4/2016, ದಿನಾಂಕ 14-06-2016 ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಆರ್. ಎಲ್. ಚಿನ್ನಮ್ಮ 23/7
(ಆರ್.ಎಲ್. ಚಿನ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ (ರೇಷ್ಮೆ)
ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ

**<u>ಇವರಿಗೆ:</u>**

1. ಮಹಾಲೇಖಪಾಲರು, (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.

ಮು.ತಿ.ನೋ. . . .